**ಕರ್ನಾಟಕ ಸರ್ಕಾರ**

ಸಾರ್ವಜನಿಕ ಶಿಕ್ಷಣ ಇಲಾಖೆ

ಸಹನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ವಿಭಾಗ, ಆಯುಕ್ತರ ಕಛೇರಿ, ಹೊಸ ಸಾರ್ವಜನಿಕ ಕಛೇರಿಗಳು, ನೃಪತುಂಗರಸ್ತೆ, ಬೆಂಗಳೂರು-560001

ಸಂಖ್ಯೆ: ಸನಿ.ಸ.ಪ್ರೌ.ಶಾ.ಶಿ.ನೇ-01/2012-13 ದಿನಾಂಕ: 28-06-2012

ಗೆ

ಉಪನಿರ್ದೇಶಕರು
ಸಾರ್ವಜನಿಕ ಶಿಕ್ಷಣ ಇಲಾಖೆ
ಬೆಂಗಳೂರು ಉತ್ತರ, ಬೆಂಗಳೂರು ದಕ್ಷಿಣ, ಚಿತ್ರದುರ್ಗ, ದಾವಣಗೆರೆ, ಕೋಲಾರ
ಮಂಡ್ಯ, ಶಿವಮೊಗ್ಗ, ತುಮಕೂರು, ಚಿಕ್ಕಬಳ್ಳಾಪುರ, ಮಧುಗಿರಿ, ರಾಮನಗರ ಜಿಲ್ಲೆಗಳಿಗೆ

ಮಾನ್ಯರೆ,

ವಿಷಯ:- ದಿನಾಂಕ 15-07-2012 ರಿಂದ 18-07-201ರ ವರೆಗೆ ಪ್ರೌಢಶಾಲಾ ಸಹ ಶಿಕ್ಷಕರ ನೇಮಕಾತಿಯ ಸ್ಪರ್ಧಾತ್ಮಕ ಪರೀಕ್ಷಾ ಕೇಂದ್ರಗಳ ಸಿದ್ಧತೆಯ ಬಗ್ಗೆ

ಉಲ್ಲೇಖ:- ವಿಶೇಷಾಧಿಕಾರಿಗಳು, ಕೇಂದ್ರೀಕೃತ ದಾಖಲಾತಿ ಘಟಕ, ಬೆಂಗಳೂರು ರವರ ಪತ್ರ ಸಂಖ್ಯೆ:ಸಿಎಸಿ-8/ಸ.ಪ್ರೌ.ಶಾ:/1012-13 ದಿನಾಂಕ 19-06-2012

-0-

ಉಲ್ಲೇಖಪತ್ರದನ್ವಯ ಪ್ರೌಢಶಾಲಾ ಸಹ ಶಿಕ್ಷಕರ ನೇಮಕಾತಿಯ ಸ್ಪರ್ಧಾತ್ಮಕ ಪರೀಕ್ಷೆಯನ್ನು ದಿನಾಂಕ 15-07-2012 ರಿಂದ 18-07-2012 ರವರೆಗೆ ನಡೆಸುವ ಸಂಬಂಧ ಈ ಕೆಳಕಂಡ ಅಂಶಗಳ ಬಗ್ಗೆ ನಿಮ್ಮ ಜಿಲ್ಲೆಯಲ್ಲಿ ಪೂರ್ವಭಾವಿಯಾಗಿ ಸಿದ್ಧತೆ ಕುರಿತು ವೈಯುಕ್ತಿಕ ಗಮನ ನೀಡಿ ಪರಿಶೀಲಿಸಿ ವರದಿ ಮಾಡಲು ಉಲ್ಲೇಖದ ವಿಶೇಷಾಧಿಕಾರಿಗಳ ಪತ್ರದಲ್ಲಿ ವರದಿ ಸಲ್ಲಿಸಲು ತಿಳಿಸಿರುತ್ತಾರೆ. ದಿನಾಂಕ 04-07-2012 ರಂದು ನಡೆಯುವ ಪ್ರೌಢಶಾಲಾ ಸಹ ಶಿಕ್ಷಕರ ಸ್ಪರ್ಧಾತ್ಮಕ ಪರೀಕ್ಷೆಯ ಪೂರ್ವ ಸಿದ್ಧತೆಯ ಸಭೆಗೆ ಮಾಹಿತಿಗಳನ್ನು ಸಂಗ್ರಹಿಸಿ ಸಭೆಗೆ ಹಾಜರಾಗಬೇಕಾಗಿರುವುದರಿಂದ ದಿನಾಂಕ 02-07-2012 ರೊಳಗೆ ವರದಿಯನ್ನು ತಪ್ಪದೇ ಈ ಕಛೇರಿಗೆ ಸಲ್ಲಿಸಲು ಸೂಚಿಸಿದೆ.

- ಪರಿಕ್ಷಾ ಕೇಂದ್ರಗಳ ರಚನೆ
- ರಚಿಸಿರುವ ಪರೀಕ್ಷಾ ಕೇಂದ್ರಗಳ ಅಗತ್ಯ ಮೂಲ ಭೂತ ಸೌಲಭ್ಯಗಳಾದ ಪೀಠೋಪಕರಣ, ಕುಡಿಯುವ ನೀರು, ಶೌಚಾಲಯ, ಉತ್ತಮ ಗಾಳಿ-ಬೆಳಕು ಇತ್ಯಾದಿ ವ್ಯವಸ್ಥೆ ಇರುವ ಬಗ್ಗೆ
- ಪರೀಕ್ಷೆ ನಡೆಯುವ ದಿನಾಂಕದ ಬಗ್ಗೆ ಕೇಂದ್ರಗಳ ಮುಖ್ಯಸ್ಥರಿಗೆ ಸೂಚನೆ ನೀಡಿರುವ ಬಗ್ಗೆ
- ಪರೀಕ್ಷಾ ಕೇಂದ್ರಗಳ ಮುಖ್ಯ ಅಧೀಕ್ಷಕರ ನೇಮಕಾತಿ ಬಗ್ಗೆ
- ಪರೀಕ್ಷಾ ಕೇಂದ್ರಗಳ ವೀಕ್ಷಕರ ನೇಮಕಾತಿ ಬಗ್ಗೆ
- ಪರೀಕ್ಷಾ ಕೇಂದ್ರಗಳ ಮಾರ್ಗಾಧಿಕಾರಿಗಳ ನೇಮಕಾತಿ ಬಗ್ಗೆ
- ಪರೀಕ್ಷಾ ಪೂರ್ವ ಸಿದ್ಧತೆ ಕುರಿತು ಜಿಲ್ಲೆಗಳಲ್ಲಿ ಸಭೆ ನಡೆಸಿರುವ ಬಗ್ಗೆ
- ಪರೀಕ್ಷಾ ಕಾರ್ಯಕ್ಕೆ ಅಗತ್ಯ ವಾಹನ ಸೌಲಭ್ಯ ಮಾಡಿಕೊಂಡಿರುವ ಬಗ್ಗೆ
- ಸ್ಥಳೀಯ ಪೊಲೀಸ್ ಅಧಿಕಾರಿಗಳನ್ನು ಸಂಪರ್ಕಿಸಿ ಪರೀಕ್ಷಾ ಕೇಂದ್ರಕ್ಕೆ ಸೂಕ್ತ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಹಾಗೂ ಸೆಕ್ಷನ್ 144 ಜಾರಿಗೆ ಕ್ರಮ ಕೈಗೊಂಡಿರುವ ಬಗ್ಗೆ
- ಪರೀಕ್ಷಾ ಕೇಂದ್ರದಲ್ಲಿ ಹಾಗೂ ಪರೀಕ್ಷಾ ಕೇಂದ್ರದ ಸುತ್ತ ಮುತ್ತ ಪರೀಕ್ಷಾ ದಿನಗಳಂದು ಜೆರಾಕ್ಸ್ ಮಾಡುವುದನ್ನು ನಿರ್ಬಂಧಿಸುವ ಬಗ್ಗೆ

ತಮ್ಮ ನಂಬುಗೆಯ

(ಎಸ್. ಜಯಕುಮಾರ್)
ಸಹನಿರ್ದೇಶಕರು (ಪ್ರ)
ಬೆಂಗಳೂರು ವಿಭಾಗ, ಬೆಂಗಳೂರು.